For more job news visit : www.kpscvaani.com

ಕರ್ನಾಟಕ ಪರೀಕ್ಷಾ ಪ್ರಾಧಿಕಾರ

Karnataka Examinations Authority

KEA

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.03/2023-24 ದಿನಾಂಕ: 23.09.2024

## ಪ್ರಕಟಣೆ

**BMTC ಸಂಸ್ಥೆಯಲ್ಲಿ ಖಾಲಿ ಇರುವ ನಿರ್ವಾಹಕರು-ಉಳಿಕೆ ಮೂಲ ವೃಂದ ಹುದ್ದೆಗಳಿಗೆ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿರುವ ಅಂತಿಮ ಅಂಕಗಳನ್ನು ಪ್ರಕಟಿಸಿರುವ ಬಗ್ಗೆ.**

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ 01.09.2024 ರಂದು BMTC ಸಂಸ್ಥೆಯಲ್ಲಿನ ನಿರ್ವಾಹಕರು-**ಉಳಿಕೆ ಮೂಲ ವೃಂದ** ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿರುತ್ತದೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದಂತೆ ದಿನಾಂಕ 02.09.2024 ರಂದು ತಾತ್ಕಾಲಿಕ ಕೀ ಉತ್ತರಗಳನ್ನು ಪ್ರಕಟಿಸಿ ದಿನಾಂಕ 05.09.2024 ರವರೆಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದ್ದು, ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿಯ ಮೂಲಕ ಪರಿಶೀಲಿಸಿ, ವಿಷಯ ತಜ್ಞರ ಸಮಿತಿಯ ಶಿಫಾರಸ್ಸಿನಂತೆ ಪರಿಷ್ಕೃತ ಕೀ ಉತ್ತರಗಳನ್ನು ದಿನಾಂಕ 11.09.2024 ರಂದು ಪ್ರಕಟಿಸಲಾಗಿರುತ್ತದೆ.

ಅದರಂತೆ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ತಾತ್ಕಾಲಿಕ ಅಂಕಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಲಿಂಕ್ ಮೂಲಕ ಪ್ರಕಟಿಸಿ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ 18.09.2024 ಸಂಜೆ 5.30 ರೊಳಗೆ ನಿಗದಿತ ಲಿಂಕ್ ಮೂಲಕ ಪೂರಕ ದಾಖಲೆಗಳೊಂದಿಗೆ ಸಲ್ಲಿಸಲು ತಿಳಿಸಲಾಗಿತ್ತು. ತಾತ್ಕಾಲಿಕ ಅಂಕ ಪಟ್ಟಿಗೆ ಸ್ವೀಕೃತವಾದ ಎಲ್ಲಾ ಆಕ್ಷೇಪಣೆಗಳನ್ನು ಪರಿಶೀಲಿಸಿ ಅಭ್ಯರ್ಥಿಯು ಪರೀಕ್ಷೆಯಲ್ಲಿ ಗಳಿಸಿದ ಅಂತಿಮ ಅಂಕಗಳನ್ನು ಸಿದ್ಧಪಡಿಸಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ ಮತ್ತು ಸದರಿ ಅಭ್ಯರ್ಥಿಗಳ ಅಂತಿಮ ಅಂಕಗಳ ವಿವರಗಳನ್ನು ಸಂಬಂಧಪಟ್ಟ ಸಂಸ್ಥೆಗೆ ಹಸ್ತಾಂತರಿಸಲಾಗುವುದು. ಸಂಬಂಧಪಟ್ಟ ಸಂಸ್ಥೆಯವರು ನಿಯಮಾನುಸಾರ ಆಯ್ಕೆ ಪಟ್ಟಿ ಪ್ರಕಟಿಸಲು ಕ್ರಮವಹಿಸುವರು.

ಸಹಿ/-

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in